500 ಮನೆಗಳನ್ನು ನಿರ್ಮಿಸುವುದಿಲ್ಲವೋ ಆ ಕ್ಷೇತ್ರದಲ್ಲಿ ಉಳಿದ ಮನೆಗಳನ್ನು ಜಿಲ್ಲಾಧಿಕಾರಿಯವರಿಂದ ನಿರ್ಮಿಸಲು ನಿರ್ಧರಿಸಿದೆ.

ಹೊನ್ನಾವರ ತಾಲ್ಲೂಕಿನಲ್ಲಿ ಆಂಗನವಾಡಿ ಕಾರ್ಯಕ್ರಮ ಜಾರಿ.

1004-ಶ್ರೀ ಆರ್.ಎನ್. ನಾಯ್ಕ (ಭಟ್ಕಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) ರಾಜ್ಯದ ಎಷ್ಟು ತಾಲ್ಲೂಕುಗಳಲ್ಲಿ ಆಂಗನವಾಡಿ ಕಾರ್ಯಕ್ರಮ ಜಾರಿಯಲ್ಲಿರುವುದು?

2) ಉತ್ತರ ಕನ್ನಡ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಆಂಗನವಾಡಿ ಕಾರ್ಯಕ್ರಮ ಜಾರಿಯಲ್ಲಿದೆ?

3) ಹೊನ್ನಾವರ ತಾಲ್ಲೂಕಿನಲ್ಲಿ ಆಂಗನವಾಡಿ ಕಾರ್ಯಕ್ರಮ ಜಾರಿಗೊಳಿಸಲು ಸರ್ಕಾರದವರಿಗೆ ಇರುವ ತೊಂದರೆಗಳೇನು

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು)

ಅ) ರಾಜ್ಯದ 133ತಾಲ್ಲೂಕುಗಳಲ್ಲಿ ಐಸಿಡಿಎಸ್ ಕಾರ್ಯಕ್ರಮ ಜಾರಿಯಲ್ಲಿರುವುದು.

ಆ) ಸೂಫ, ಯಲ್ಲಾಪುರ, ಕಾರವಾರ, ಅಂಕೋಲ, ಕುಮಟಾ ಹಾಗೂ ಭಟ್ಕಳ ತಾಲ್ಲೂಕುಗಳಲ್ಲಿ ಐಸಿಡಿಎಸ್ ಕಾರ್ಯಕ್ರಮ ಜಾರಿಯಲ್ಲಿದೆ.

ಇ) ಈ ಯೋಜನೆಯನ್ನು ಕೇಂದ್ರ ಸರ್ಕಾರದವರೇ ಮಂಜೂರು ಮಾಡುತ್ತಾರೆ. ಕೇಂದ್ರ ಸರ್ಕಾರದಿಂದ ಹೊನ್ನಾವರ ಐಸಿಡಿಎಸ್ ಯೋಜನೆ ಇದುವರೆಗೂ ಮಂಜೂರಾಗಿಲ್ಲವೆಂದು ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿಲ್ಲ.

ಹೊನ್ನಾವರ ತಾಲ್ಲೂಕೂ ಸೇರಿದಂತೆ ಇನ್ನೂ ಮಂಜೂರಾಗದೆ ಇರುವ ರಾಜ್ಯದ ಎಲ್ಲಾ ತಾಲ್ಲೂಕುಗಳ ಮಾಹಿತಿಯನ್ನು ಕೇಂದ್ರ ಸರಕಾರದ ಪರಿಶೀಲನೆಗಾಗಿ ದಿನಾಂಕ 17-7-90ರಂದು ಕಳುಹಿಸಲಾಗಿದೆ. ಕೇಂದ್ರ ಸರಕಾರದ ಮಂಜೂರಾತಿ ದೊರೆತ ಮೇಲೆ ಇಲ್ಲೂ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ.

ಆಶ್ರಮ ಯೋಜನೆಯಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ.

1033-ಶ್ರೀ ಮನೋಹರ ಐನಾಪುರ, (ಬೆಳ್ಳೋಳ್ಳಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಶ್ರಮ ಯೋಜನೆಯಡಿ ರಾಜ್ಯದಲ್ಲಿ ಇದುವರೆವಿಗೂ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು?

ಆ) 1994.95ರೊಳಗೆ ಈ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಗೋಪಿನಾಥ್ ಆರ್. ಸಾಂಡ್ರಾ (ವಸತಿ ಸಚಿವರು)

ಅ) 1044 ಮನೆಗಳು.

ಆ) ಸರ್ಕಾರದ ಆದೇಶ ಸಂಖ್ಯೆ ಹೆಚ್‌ಯುಡಿ 352 ಕೆಹೆಚ್‌ಬಿ 92 ದಿನಾಂಕ 15:12:92 ರ ಪ್ರಕಾರ ಕರ್ನಾಟಕ ಗೃಹ ಮಂಡಳಿ ಗುತ್ತಿಗೆದಾರರಿಗೆ ಮುಂಗಡವಾಗಿ ನೀಡಿರುವ ಮೊತ್ತಕ್ಕೆ ಸೀಮಿತವಾಗಿ ಆಶ್ರಯ ಮನೆಗಳನ್ನು ಪೂರ್ತಿ ಮಾಡುವಂತೆಯೂ

ಮತ್ತು ಉಳಿದವುಗಳನ್ನು ಜಿಲ್ಲಾಧಿಕಾರಿಗಳ ಮೂಲಕ ನಿರ್ಮಿಸಲು ಸರ್ಕಾರ ನಿರ್ಧರಿಸಿದೆ.

ಬೆಂಗಳೂರು ಮಹಾನಗರ ಪಾಲಿಕೆ ಪರಿಸ್ಥಿತಿ ಕುರಿತು.

1076-ಶ್ರೀ ಎ.ಕೆ. ಅನಂತಕೃಷ್ಣ (ಶಿವಾಜಿನಗರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ಮಹಾನಗರ ಪಾಲಿಕೆಯು ಆರ್ಥಿಕ ಸಂದಿಗ್ಧ ಪರಿಸ್ಥಿತಿಯನ್ನು ಅನುಭವಿಸುತ್ತಿರುವುದು ಹಾಗೂ ಅದರಿಂದಾಗಿ ಸಾಧಾರಣ ನಿರ್ವಹಣೆ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಹ ತೆಗೆದುಕೊಳ್ಳಲಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ನಗರಪಾಲಿಕೆಯ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?*

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು)

ಅ) ಇಲ್ಲ.

ಆ) ಮೇಲಿನ ಪ್ರಶ್ನೆಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಪೈಕಿ ತೋರ್ಕರಸಿಹಳ್ಳಿ ಗ್ರಾಮದಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಮಂಜೂರು.

1081-ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾಂ ಜಿಲ್ಲೆ ಬೈಲಹೊಂಗಲ ವಿದ್ಯಾರ್ಥಿಗಳಿಗೆ ತೋರ್ಕರಸಿಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಇಲ್ಲದೇ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೆ.*

ಇ) *ಹಾಗಿದ್ದಲ್ಲಿ, ಅಲ್ಲಿ ಹಿಂದುಳಿದ ವರ್ಗಗಳ ಪೈಕಿ ಪ್ರಾರಂಭಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?*

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಅದ ಉತ್ತರದಿಂದ ಉದ್ಭವಿಸುವುದಿಲ್ಲ.

ಹೋಟೆಲ್ ಬಾಲ ಕಾರ್ಮಿಕರಿಗೆ ಕೆಲಸಕ್ಕೆ ತೆಗೆದುಕೊಳ್ಳುತ್ತಿರುವ ಬಗ್ಗೆ.

1082-ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?